# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1084** |
| ಉತ್ತರಿಸಬೇಕಾದ ದಿನಾಂಕ | : | 22.12.2021 |
| ಉತ್ತರಿಸಬೇಕಾದ ಸಚಿವರು | : | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಜನರಿಗೆ ಎಷ್ಟು ವಸತಿಗಳನ್ನು ನಿರ್ಮಾಣ ಮಾಡಿಕೊಡಲಾಗಿದೆ ಮತ್ತು ಇನ್ನೂ ಎಷ್ಟು ಜನರಿಗೆ ವಸತಿ ನೀಡಬೇಕಾಗಿದೆ; | ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗಕ್ಕೆ ದೇವರಾಜ ಅರಸು ವಸತಿ ಯೋಜನೆಯಲ್ಲಿ ವಸತಿ ಸೌಕರ್ಯ ಕಲ್ಪಿಸಲಾಗುತ್ತಿದೆ. ಸದರಿ ಯೋಜನೆಗಳಡಿಯಲ್ಲಿ ಅಲೆಮಾರಿ/ಅರೆ ಅಲೆಮಾರಿ ವರ್ಗದ ವಸತಿ ರಹಿತರಿಗೆ 2012-13ನೇ ಸಾಲಿನಿಂದ 2020-21ನೇ ಸಾಲಿನವರೆಗೆ ನೀಡಲಾದ ಮನೆಗಳ ವಿವರ ಕೆಳಕಂಡಂತಿದೆ. |
| (ಆ) | ನೀಡಿದ್ದಲ್ಲಿ, ವಸತಿ ಹಂಚಿಕೆಯಲ್ಲಿ ಯಾವ ಪ್ರಕ್ರಿಯೆ ಕೈಗೊಳ್ಳಲಾಗಿದೆ; ಫಲಾನುಭವಿಗಳ ಆಯ್ಕೆ ಮಾಡುವ ಅಧಿಕಾರ ಯಾರಿಗಿದೆ; ಅದಕ್ಕಾಗಿ ಸಮಿತಿ ಇದೆಯೇ; ಹಾಗಿದ್ದಲ್ಲಿ ವಿವರ ನೀಡುವುದು; | (see table and text below) |

| ಯೋಜನೆ | ಅನುಮೋದನೆ ಗೊಂಡ ಮನೆಗಳು | ಪೂರ್ಣ ಗೊಂಡ ಮನೆಗಳು | ಪ್ರಗತಿಯಲ್ಲಿ ರುವ ಮನೆಗಳು | ಪ್ರಾರಂಭ ವಾಗಬೇಕಿ ರುವ ಮನೆಗಳು | ಬ್ಲಾಕ್ ಆದ ಮನೆಗಳು |
|---|---|---|---|---|---|
| ದೇವರಾಜ ಅರಸು ವಸತಿ ಯೋಜನೆ | 593 | 428 | 65 | 37 | 63 |
| ಒಟ್ಟು | 593 | 428 | 65 | 37 | 63 |

ಬೀದರ್ ಜಿಲ್ಲೆಯಲ್ಲಿ ಅಲೆಮಾರಿ ಅರೆ ಅಲೆಮಾರಿ ವರ್ಗದವರನ್ನು ಒಳಗೊಂಡಂತೆ ಒಟ್ಟು ವಸತಿ/ನಿವೇಶನ ರಹಿತರು 140508 ಇರುವುದು ಕಂಡು ಬಂದಿರುತ್ತದೆ. ಸದರಿ ವರ್ಗದ ವಸತಿ ರಹಿತರಿಗೆ ಜಿಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದ್ದು, ಈ ಸಮಿತಿಯ ಮೂಲಕ ಅರ್ಹ ಫಲಾನುಭವಿಗಳನ್ನು ಆಯ್ಕೆಮಾಡಿ ಸರ್ಕಾರದಿಂದ ಒದಗಿಸಲಾದ ಅನುದಾನಕ್ಕೆ ಅನುಗುಣವಾಗಿ ಹಂತ ಹಂತವಾಗಿ ಎಲ್ಲಾ ಅರ್ಹ ಅಲೆಮಾರಿ/ ಅರೆ ಅಲೆಮಾರಿ ವರ್ಗದವರಿಗೆ ವಸತಿ ಸೌಕರ್ಯ ಕಲ್ಪಿಸಲಾಗುವುದು.

ಬೀದರ್ ಜಿಲ್ಲೆಯ ಬಸವಕಲ್ಯಾಣ ವಿಧಾನಸಭಾ ಕ್ಷೇತ್ರಕ್ಕೆ 2020-21 ನೇ ಸಾಲಿನಲ್ಲಿ ದೇವರಾಜ ಅರಸು ವಸತಿ ಯೋಜನೆಯಡಿ ಅಲೆಮಾರಿ /ಅರೆ ಅಲೆಮಾರಿ ಜನಾಂಗಕ್ಕೆ 2500 ಮನೆಗಳ ಗುರಿಯನ್ನು ಮಂಜೂರು ಮಾಡಲಾಗಿದ್ದು, ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಫಲಾನುಭವಿಗಳ ಆಯ್ಕೆ

| | | |
|---|---|---|
| | | ಮಾಡಿ ಸಭಾ ನಡವಳಿಯೊಂದಿಗೆ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ. |
| (ಇ) | ಈ ಜನಾಂಗಕ್ಕೆ ಪ್ರತ್ಯೇಕ ಓಣಿ ನಿರ್ಮಾಣ ಮಾಡಲಾಗಿದೆಯೇ; ಅಥವಾ ಮಾಡುವ ಯೋಚನೆ ಏನಾದರು ಸರ್ಕಾರದ ಮುಂದಿದೆಯೇ; | ಸದರಿ ವಸತಿ ಯೋಜನೆಯಡಿ ನೀಡಲಾಗುವ ಮನೆಗಳು ಫಲಾನುಭವಿಗಳೇ ಸ್ವಂತ ಮನೆ ನಿರ್ಮಾಣ ಮಾಡಿಕೊಳ್ಳಲು ಮೊದಲ ಆದ್ಯತೆ ನೀಡಲಾಗಿದ್ದು, ಈ ವರ್ಗದ ವಸತಿ ರಹಿತರಿಗೆ ಪ್ರತ್ಯೇಕವಾಗಿ ಈವರೆಗೆ ಯಾವುದೇ ಓಣಿ ನಿರ್ಮಾಣ ಮಾಡುವ ಯೋಜನೆ ಪ್ರಸ್ತುತ ಸರ್ಕಾರದ ಮುಂದಿರುವುದಿಲ್ಲ. |
| (ಈ) | ಈ ಜನಾಂಗದ ಸರ್ವೆ ಕಾರ್ಯವನ್ನು ಕೈಗೊಳ್ಳಲಾಗಿದೆಯೇ; ಕೈಗೊಂಡಿದ್ದಲ್ಲಿ, ಸರ್ವೆ ಮಾಹಿತಿ ಹಾಗೂ ವರದಿಯೊಂದಿಗೆ ವಿವರ ನೀಡುವುದು ? | 2018 ರಲ್ಲಿ ಸ್ಥಳೀಯ ಸಂಸ್ಥೆಗಳ ಮೂಲಕ ಅಲೆಮಾರಿ/ಅರೆ ಅಲೆಮಾರಿ ವರ್ಗದವರು ಸೇರಿದಂತೆ ವಸತಿ ರಹಿತರ ಹಾಗೂ ನಿವೇಶನ ರಹಿತರ ಸಮೀಕ್ಷೆ ಮಾಡಲಾಗಿದ್ದು, ಬೀದರ್ ಜಿಲ್ಲೆಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಕ್ಕೆ ಸೇರಿ ಒಟ್ಟು 140508 ವಸತಿ ರಹಿತರಿರುವುದು ಕಂಡು ಬಂದಿರುತ್ತದೆ. |

ಸಂಖ್ಯೆ :ವಇ 477 ಹೆಚ್‌ಎಎಂ 2021

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು